# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 745
2. ಸದಸ್ಯರ ಹೆಸರು : ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 13.07.2023
4. ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಮೇಕೆದಾಟು ಯೋಜನೆ ಕಳೆದ ಹತ್ತಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯ ವಿವರವಾದ ಯೋಜನಾ ವರದಿಗೆ ಕೇಂದ್ರ ಜಲ ಆಯೋಗ ಹಾಗೂ, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ (MoEF & CC) ಗಳ ತೀರುವಳಿ ಬಾಕಿ ಇದೆ. |
| (ಆ) | ಈ ಯೋಜನೆಯಿಂದ ಬೆಂಗಳೂರು ನಗರ ಕುಡಿಯುವ ನೀರಿಗೆ ಹಾಗೂ ರೈತರ ವ್ಯವಸಾಯಕ್ಕೆ ದೊರೆಯಬಹುದಾದ ನೀರಿನ ಪ್ರಮಾಣವೆಷ್ಟು; | ಮೇಕೆದಾಟು ಯೋಜನೆಯಿಂದ ಬೆಂಗಳೂರು ನಗರಕ್ಕೆ ಕುಡಿಯುವ ನೀರಿಗಾಗಿ 4.75 ಟಿ.ಎಂ.ಸಿ. (Consumptive use) [amounting to 23.75 TMC at drawal point] ನೀರು ದೊರಕಬಹುದಾಗಿದ್ದು, ವ್ಯವಸಾಯಕ್ಕಾಗಿ ನೀರಿನ ಪ್ರಾವಿಧಾನವಿರುವುದಿಲ್ಲ. |
| (ಇ) | ಮುಳುಗಡೆಯಾಗಲಿರುವ ಅರಣ್ಯ ಮತ್ತು ಕೃಷಿ ಜಮೀನಿನ ವ್ಯಾಪ್ತಿ ಎಷ್ಟು; ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು? | • ಪ್ರಸ್ತಾಪಿತ ಯೋಜನೆಗೆ ಅವಶ್ಯವಿರುವ ಜಮೀನಿನ ಪೈಕಿ 5,096.22 ಹೆ. ಅರಣ್ಯ ಪ್ರದೇಶ ಮತ್ತು 92.12 ಹೆ. ಕೃಷಿ ಜಮೀನು ಒಳಗೊಂಡಿರುತ್ತದೆ.<br>• ವಿವರವಾದ ಯೋಜನಾ ವರದಿಗೆ ಕೇಂದ್ರ ಜಲ ಆಯೋಗ ಹಾಗೂ, ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯಗಳ ತೀರುವಳಿ ಬಾಕಿ ಇದೆ. ಇದಲ್ಲದೆ, ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಕೆಲವು ಅರ್ಜಿಗಳು ಬಾಕಿ ಇರುತ್ತವೆ. ಇವುಗಳ ತೀರುವಳಿ ನಂತರ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. |

***ಸಂಖ್ಯೆ: ಜಸಂಇ 45 ಎನ್‌ಎಲ್‌ಎ 2023***

**( ಡಿ. ಕೆ. ಶಿವಕುಮಾರ್ )**
**ಉಪ ಮುಖ್ಯಮಂತ್ರಿಗಳು**